## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2020-21ನೇ ಶೈಕ್ಷಣಿಕ ಸಾಲಿನಲ್ಲಿ ಸ್ನಾತಕೋತ್ತರ ಪದವಿಗಳಾದ ಎಂ.ಬಿ.ಎ/ಎಂ.ಸಿ.ಎ/ಎಂ.ಇ/ಎಂ.ಟೆಕ್ ಕೋರ್ಸುಗಳಿಗೆ ಸೀಟು ಹಂಚಿಕೆ, ಶುಲ್ಕ ನಿಗಧಿ ಮತ್ತು ಪ್ರವೇಶ ಪರೀಕ್ಷೆ ಪ್ರಕ್ರಿಯೆ ಕೈಗೊಳ್ಳುವ ಕುರಿತು.

ಓದಲಾಗಿದೆ

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 101 ಟಿಇಸಿ 2005, ಬೆಂಗಳೂರು, ದಿನಾಂಕ:21.05.2005
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 105 ಟಿಇಸಿ 2005, ಬೆಂಗಳೂರು, ದಿನಾಂಕ:25.05.2005
3. ಸರ್ಕಾರದ ಆದೇಶ ಸಂಖ್ಯೆ: ಇಡಿ 25 ಟಿಇಸಿ 2019, ದಿನಾಂಕ:27.05.2019.

ಪ್ರಸ್ತಾವನೆ

ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (2)ರಲ್ಲಿನ ಅಧಿಸೂಚನೆಗಳಲ್ಲಿ ಕ್ರಮವಾಗಿ The Karnataka Selection of Candidates for Admission to Master of Business Administration and Master of Computer Application Courses Rules, 2005 ಮತ್ತು The Karnataka Selection of Candidates for Admission to Master of Engineering and Master of Technology Courses Rules, ನಿಯಮಗಳನ್ನು ರಚಿಸಲಾಗಿದೆ. ಇದರಲ್ಲಿ, ಸ್ನಾತಕೋತ್ತರ ಕೋರ್ಸುಗಳಿಗೆ ಸೀಟು ಹಂಚಿಕೆ ಪ್ರಕ್ರಿಯೆಯನ್ನು ಕೈಗೊಳ್ಳಲು ಅವಕಾಶ ಕಲ್ಪಿಸಲಾಗಿದೆ.

2. ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿನ ಸರ್ಕಾರಿ ಆದೇಶದಲ್ಲಿ 2019-20 ನೇ ಶೈಕ್ಷಣಿಕ ಸಾಲಿನಲ್ಲಿ ಸ್ನಾತಕೋತ್ತರ ಪದವಿಗಳಾದ ಎಂ.ಬಿ.ಎ./ಎಂ.ಸಿ.ಎ/ಎಂ.ಇ/ಎಂ.ಟೆಕ್ ಕೋರ್ಸುಗಳಿಗೆ ಸೀಟು ಹಂಚಿಕೆ ಪ್ರಮಾಣ, ಪ್ರವೇಶ ಪ್ರಕ್ರಿಯೆ ಮತ್ತು ಬೋಧನಾ ಶುಲ್ಕವನ್ನು ನಿಗಧಿಪಡಿಸಲಾಗಿದೆ.

3. ಸ್ನಾತಕೋತ್ತರ ಪದವಿಗಳಾದ ಎಂ.ಬಿ.ಎ./ಎಂ.ಸಿ.ಎ/ಎಂ.ಇ/ಎಂ.ಟೆಕ್ ಕೋರ್ಸುಗಳಿಗೆ ಸೀಟು ಹಂಚಿಕೆ ಪ್ರಮಾಣ, ಪ್ರವೇಶ ಪ್ರಕ್ರಿಯೆ ಮತ್ತು ಬೋಧನಾ ಶುಲ್ಕವನ್ನು ಈ ಹಿಂದಿನ ಸಾಲಿನಲ್ಲಿ ನಿಗಧಿಪಡಿಸಿರುವುದನ್ನು 2020-21ನೇ ಶೈಕ್ಷಣಿಕ ಸಾಲಿಗೂ ಮುಂದುವರಿಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 54 ಟಿಇಸಿ 2020**
**ಬೆಂಗಳೂರು ದಿನಾಂಕ: 20ನೇ ಜುಲೈ 2020**

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಸರ್ಕಾರವು ಪರಿಗಣಿಸಿ, 2020-21ನೇ ಶೈಕ್ಷಣಿಕ ಸಾಲಿನಲ್ಲಿ ಸ್ನಾತಕೋತ್ತರ ಪದವಿಗಳಾದ ಎಂ.ಬಿ.ಎ/ಎಂ.ಸಿ.ಎ./ಎಂ.ಇ./ಎಂ.ಟೆಕ್ ಕೋರ್ಸುಗಳ ಸೀಟು ಹಂಚಿಕೆ ಹಾಗೂ

23/7/20

ಶುಲ್ಕ ನಿಗಧಿ ರಚನೆ ಪ್ರಕ್ರಿಯೆಯನ್ನು ಈ ಕೆಳಗಿನಂತೆ ಸರ್ಕಾರವು ಪರಿಗಣಿಸಿ ಆದೇಶಿಸಿದೆ ಹಾಗೂ 2020-21ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಕೋರ್ಸುಗಳ ಪ್ರವೇಶ ಪ್ರಕ್ರಿಯೆಯನ್ನು ನಿರ್ವಹಿಸಲು ಮುಂದಿನ ಆದೇಶದವರೆಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಿ ಆದೇಶಿಸಿದೆ.

**ಎಂ.ಬಿ.ಎ ಮತ್ತು ಎಂ.ಸಿ.ಎ ಸ್ನಾತಕೋತ್ತರ ಪದವಿ:**

1) 2020-21ನೇ ಶೈಕ್ಷಣಿಕ ಸಾಲಿನಲ್ಲಿ ಎಲ್ಲಾ ಖಾಸಗಿ ಅನುದಾನರಹಿತ ಸಂಸ್ಥೆಗಳಲ್ಲಿನ ಎಂ.ಬಿ.ಎ. ಸ್ನಾತಕೋತ್ತರ ಕೋರ್ಸಿನ ಒಟ್ಟು ವಿದ್ಯಾರ್ಥಿಗಳ ಪ್ರವೇಶಾತಿಯಲ್ಲಿ ಶೇ.50 ರಷ್ಟು ವಿದ್ಯಾರ್ಥಿಗಳ ಪ್ರವೇಶಾತಿಯನ್ನು **"ಸ್ನಾತಕೋತ್ತರ ಸಾಮಾನ್ಯ ನಿರ್ವಹಣಾ ಪ್ರವೇಶ ಪರೀಕ್ಷೆ"** (PGCET) ಯಲ್ಲಿ ವಿದ್ಯಾರ್ಥಿಗಳು ಪಡೆಯುವ ಅರ್ಹತೆಯ ಆಧಾರದ ಮೇಲೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಆನ್‌ಲೈನ್/ ಕೇಂದ್ರೀಕೃತ ಕೌನ್ಸಿಲಿಂಗ್ ಮುಖಾಂತರ ಭರ್ತಿ ಮಾಡತಕ್ಕದ್ದು. ಉಳಿದ ಶೇ.50 ರಷ್ಟು ಸೀಟುಗಳನ್ನು ಆಯಾ ಆಡಳಿತ ಮಂಡಳಿಗಳು ಕರ್ನಾಟಕ ಖಾಸಗಿ ಸ್ನಾತಕೋತ್ತರ ಪದವಿ ಕಾಲೇಜುಗಳ ಸಂಘದವರು ನಡೆಸುವ "ಕರ್ನಾಟಕ ನಿರ್ವಹಣಾ ಪ್ರವೇಶ ಪರೀಕ್ಷೆ" (Karnataka Management Admission Test (KMAT) Conducted by KPPGCA) ಯಲ್ಲಿ ವಿದ್ಯಾರ್ಥಿಗಳು ಪಡೆಯುವ ಅರ್ಹತೆಯ ಆಧಾರದ ಮೇಲೆ ಮತ್ತು ಸಂಬಂಧಪಟ್ಟ ಪ್ರಾಧಿಕಾರಗಳು ಅಥವಾ ಸಿ-ಮ್ಯಾಟ್ ರ್‍ಯಾಂಕಿಂಗ್‌ನ ಆಧಾರದ ಮೇಲೆ ಶೈಕ್ಷಣಿಕ ಅರ್ಹತೆ ಪಡೆದಿರುವ ಷರತ್ತಿಗೊಳಪಟ್ಟು ಭರ್ತಿ ಮಾಡಿಕೊಳ್ಳತಕ್ಕದ್ದು.

2) ಎಂ.ಸಿ.ಎ. ಸ್ನಾತಕೋತ್ತರ ಪದವಿ ಕೋರ್ಸಿನ ಶೇ.50ರಷ್ಟು ಸೀಟುಗಳನ್ನು ಎಲ್ಲಾ ಖಾಸಗಿ ಅನುದಾನರಹಿತ ಸಂಸ್ಥೆಗಳು "ಸ್ನಾತಕೋತ್ತರ ಸಾಮಾನ್ಯ ಪ್ರವೇಶ ಪರೀಕ್ಷೆ" (Post Graduate Common Entrance Test) ಯಲ್ಲಿ ವಿದ್ಯಾರ್ಥಿಗಳು ಪಡೆಯುವ ಅರ್ಹತೆಯ ಆಧಾರದ ಮೇಲೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಮೀಸಲಾತಿ ನೀತಿಯನ್ನು ಅನುಸರಿಸಿ ನಡೆಸುವ ಆನ್‌ಲೈನ್/ಕೇಂದ್ರೀಕೃತ ಕೌನ್ಸಿಲಿಂಗ್ ಮುಖಾಂತರ ಭರ್ತಿ ಮಾಡತಕ್ಕದ್ದು. ಉಳಿದ ಶೇಕಡ 50 ರಷ್ಟು ಸೀಟುಗಳನ್ನು ಆಯಾ ಆಡಳಿತ ಮಂಡಳಿಗಳು ನಡೆಸುವ ಪ್ರವೇಶ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಪಡೆಯುವ ಅರ್ಹತೆಯ ಆಧಾರದ ಮೇಲೆ ಮತ್ತು ಸಂಬಂಧಪಟ್ಟ ಪ್ರಾಧಿಕಾರಗಳ ಅರ್ಹತಾ ಪರೀಕ್ಷೆಯಲ್ಲಿನ ರ್‍ಯಾಂಕಿಂಗ್‌ನ ಆಧಾರದ ಮೇಲೆ ಶೈಕ್ಷಣಿಕ ಅರ್ಹತೆ ಪಡೆದಿರುವ ಷರತ್ತಿಗೊಳಪಟ್ಟು ಭರ್ತಿ ಮಾಡಿಕೊಳ್ಳತಕ್ಕದ್ದು.

3) ಎರಡನೇ ವರ್ಷದ ಎಂ.ಸಿ.ಎ. ಸ್ನಾತಕೋತ್ತರ ಪದವಿ ಕೋರ್ಸಿಗೆ ಮಂಜೂರಾದ ಒಟ್ಟು ಸೀಟುಗಳಲ್ಲಿ ಶೇ.10 ರಷ್ಟು ಸೀಟುಗಳನ್ನು ಜೊತೆಗೆ ಪ್ರಥಮ ವರ್ಷದ ಎಂ.ಸಿ.ಎ. ಪ್ರವೇಶಾತಿಯಲ್ಲಿ ಭರ್ತಿಯಾಗದೆ ಖಾಲಿ ಉಳಿದಿರುವ ಸೀಟುಗಳನ್ನು 10+2 ಹಂತದಲ್ಲಿ ಅಥವಾ ಪದವಿಯಲ್ಲಿ ಗಣಿತಶಾಸ್ತ್ರವನ್ನು ಒಂದು ವಿಷಯವಾಗಿ ಅಭ್ಯಾಸ ಮಾಡಿರುವ ಬಿ.ಸಿ.ಎ., ಬಿ.ಎಸ್ಸಿ. (Information Technology, Computer Science) ಕನಿಷ್ಠ ಮೂರು ವರ್ಷಗಳ ಅವಧಿಯ ಪದವಿಯನ್ನು ಹೊಂದಿರುವ ವಿದ್ಯಾರ್ಥಿಗಳಿಂದ ಭರ್ತಿ ಮಾಡಿಕೊಳ್ಳತಕ್ಕದ್ದು. ಲ್ಯಾಟರಲ್ ಎಂಟ್ರಿ ಪ್ರವೇಶಾತಿಗೆ ಅರ್ಹತಾ ಪರೀಕ್ಷೆಯಲ್ಲಿ ಇತರೆ ಅಭ್ಯರ್ಥಿಗಳಿಗೆ ಕನಿಷ್ಠ ಶೇ.50ರಷ್ಟು ಅಂಕಗಳನ್ನು ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಅಭ್ಯರ್ಥಿಗಳಾದಲ್ಲಿ ಶೇ.45ರಷ್ಟು ಅಂಕಗಳನ್ನು ಪಡೆದಿರುವ ವಿದ್ಯಾರ್ಥಿಗಳಿಂದ ಭರ್ತಿ ಮಾಡಿಕೊಳ್ಳತಕ್ಕದ್ದು.

ಎಂ.ಇ ಮತ್ತು ಎಂ.ಟೆಕ್ ಸ್ನಾತಕೋತ್ತರ ಪದವಿ:

1) ಎಂ.ಇ./ಎಂ.ಟೆಕ್. ಸ್ನಾತಕೋತ್ತರ ಪದವಿ ಕೋರ್ಸುಗಳ ಶೇ.80ರಷ್ಟು ಸೀಟುಗಳನ್ನು ಎಲ್ಲಾ ಖಾಸಗಿ ಅನುದಾನರಹಿತ ಸಂಸ್ಥೆಗಳು ಮತ್ತು ಖಾಸಗಿ ಅನುದಾನಿತ ಸಂಸ್ಥೆಗಳ ಅನುದಾನರಹಿತ ಕೋರ್ಸುಗಳಿಗೆ G.A.T.E ಅಥವಾ P.G.C.E.T ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ಪಡೆಯುವ ಅರ್ಹತೆಯ ಆಧಾರದ ಮೇಲೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಕರ್ನಾಟಕ ಸ್ನಾತಕೋತ್ತರ ಇಂಜಿನಿಯರಿಂಗ್ ಪದವಿ ವಿದ್ಯಾರ್ಥಿಗಳ ಆಯ್ಕೆ ನಿಯಮಗಳು, 2005 (M.E. and Master of Technology (M.Tech) Courses Rules, 2005) ರಲ್ಲಿ ವಿಧಿಸಿರುವ ನಿಬಂಧನೆಗಳನ್ವಯ ನಡೆಸುವ ಆನ್‌ಲೈನ್/ಕೇಂದ್ರೀಕೃತ ಕೌನ್ಸಿಲಿಂಗ್ ಮುಖಾಂತರ ಭರ್ತಿ ಮಾಡತಕ್ಕದ್ದು.

2) ಶೇ.20ರಷ್ಟು ಎಂ.ಇ./ಎಂ.ಟೆಕ್. ಸ್ನಾತಕೋತ್ತರ ಪದವಿ ಕೋರ್ಸುಗಳ ಸೀಟುಗಳನ್ನು ಎಲ್ಲಾ ಖಾಸಗಿ ಅನುದಾನರಹಿತ ಸಂಸ್ಥೆಗಳಲ್ಲಿನ ಅನುದಾನರಹಿತ ಕೋರ್ಸುಗಳಿಗೆ G.A.T.E ಅಥವಾ P.G.C.E.T ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ಪಡೆಯುವ ಅರ್ಹತೆಯ ಆಧಾರದ ಮೇಲೆ ಅಥವಾ ಕೋರ್ಸಿನ ಪ್ರವೇಶಾತಿ ಅರ್ಹತೆ ಕುರಿತಂತೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರ/ವಿಶ್ವವಿದ್ಯಾಲಯಗಳು ನಿಗದಿಪಡಿಸುವ ಪ್ರವೇಶಾತಿ ಅರ್ಹತೆಯ ಆಧಾರದ ಮೇಲೆ ಸಾಮಾನ್ಯ ಪ್ರವೇಶ ಪರೀಕ್ಷೆಯ ನಂತರದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಘದವರು ಸಿದ್ಧಪಡಿಸುವ ಅರ್ಹತಾ ಪಟ್ಟಿಯ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳತಕ್ಕದ್ದು. ಸಂಬಂಧಪಟ್ಟ ಕಾಲೇಜಿನವರು ಈ ಮೇಲೆ ತಿಳಿಸಿದ ಯಾವುದಾದರೂ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರುವ ಅಭ್ಯರ್ಥಿಗಳನ್ನು ಮಾತ್ರ ಪ್ರವೇಶಾತಿಗೆ ಪರಿಗಣಿಸತಕ್ಕದ್ದು.

**ಖಾಸಗಿ ಅನುದಾನರಹಿತ ಸಂಸ್ಥೆಗಳ ಅನುದಾನರಹಿತ ಕೋರ್ಸುಗಳ ಬೋಧನಾ ಶುಲ್ಕದ ವಿವರ:-**

| ಕ್ರ.ಸಂ. | ಸ್ನಾತಕೋತ್ತರ ಪದವಿ/ಕೋರ್ಸಿನ ಹೆಸರು | ವಾರ್ಷಿಕ ಬೋಧನಾ ಶುಲ್ಕ * |
|---|---|---|
| 01 | ಎಂ.ಬಿ.ಎ. | ರೂ.50,000/- |
| 02 | ಎಂ.ಸಿ.ಎ. | ರೂ.50,000/- |
| 03 | ಎಂ.ಇ./ಎಂ.ಟೆಕ್ | ರೂ.60,000/- |

*** ಬೋಧನಾ ಶುಲ್ಕದೊಂದಿಗೆ ವಿಶ್ವವಿದ್ಯಾಲಯ ಶುಲ್ಕವನ್ನು ಸಹ ಪಾವತಿಸತಕ್ಕದ್ದು.**

**ಇತರೆ ಸಾಮಾನ್ಯ ವಿಷಯಗಳು**

1) ಮೇಲ್ಕಂಡ ಕೋರ್ಸುಗಳ ವಿಸ್ತರಣೆಯ ಬಗ್ಗೆ ಸಂಬಂಧಪಟ್ಟ ನಿಯಂತ್ರಣ ಪ್ರಾಧಿಕಾರ/ಎಐಸಿಟಿಇ /ವಿಶ್ವವಿದ್ಯಾಲಯಗಳಿಂದ ಅನುಮೋದನಾ ಪತ್ರವು ಸ್ವೀಕೃತವಾದ ನಂತರ ಸರ್ಕಾರವು ಈ ಎಲ್ಲಾ ಕೋರ್ಸುಗಳಿಗೆ ಸೀಟ್ ಮ್ಯಾಟ್ರಿಕ್ಸ್‌ನು ಹೊರಡಿಸುವುದು.

2) ಸರ್ಕಾರದ ಆದೇಶದನ್ವಯ ಹೈದ್ರಾಬಾದ್-ಕರ್ನಾಟಕ ವಿಭಾಗಕ್ಕೆ ಸಂಬಂಧಿಸಿದಂತೆಯೆ ಮೀಸಲಾತಿಯು ಕಲಂ 371–ಜೆ ರನ್ವಯ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಅನುದಾನರಹಿತ ಶಿಕ್ಷಣ ಸಂಸ್ಥೆಗಳಿಗೆ ಅನ್ವಯವಾಗುತ್ತದೆ.

3) ಸರ್ಕಾರಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿನ ಎಲ್ಲಾ ಅನುದಾನಿತ ಕೋರ್ಸುಗಳ ಎಲ್ಲಾ ಸೀಟುಗಳನ್ನು ಸರ್ಕಾರಿ ಸೀಟುಗಳೆಂದು ಪರಿಗಣಿಸಿ ಭರ್ತಿ ಮಾಡುವುದು ಹಾಗೂ ಸದರಿ ಸೀಟುಗಳಿಗೆ ವಾರ್ಷಿಕ ರೂ.20,000/–ಗಳ ಬೋಧನಾ ಶುಲ್ಕ + ವಿಶ್ವವಿದ್ಯಾಲಯ ಶುಲ್ಕವನ್ನು ನಿಗದಿಪಡಿಸಿದೆ. ಅದೇ ರೀತಿ, ಸರ್ಕಾರಿ ಶಿಕ್ಷಣ ಸಂಸ್ಥೆಗಳು/ವಿಶ್ವವಿದ್ಯಾಲಯಗಳಡಿಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಸೀಟುಗಳಿಗೂ ಸಹ ವಾರ್ಷಿಕ ರೂ.20,000/–ಗಳ ಬೋಧನಾ ಶುಲ್ಕ + ವಿಶ್ವವಿದ್ಯಾಲಯ ಶುಲ್ಕವನ್ನು ನಿಗದಿಪಡಿಸಿದೆ.

4) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ವಿಸ್ತರಣಾ ಕೇಂದ್ರಗಳಲ್ಲಿನ ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ಸಂಬಂಧಿಸಿದಂತೆ, ಸರ್ಕಾರದ ಆದೇಶ ಸಂ: ಇಡಿ 89 ಟಿಇಸಿ 2015, ದಿನಾಂಕ : 04–04–2017ರ ಆದೇಶದಲ್ಲಿ ನಿಗಧಿಪಡಿಸಿರುವ ಶುಲ್ಕದನ್ವಯ ಭರಿಸತಕ್ಕದ್ದು.

5) ಕರ್ನಾಟಕ ಸರ್ಕಾರವು ಪ್ರಸ್ತುತ ಶೈಕ್ಷಣಿಕ ಸಾಲಿಗೆ ಸಂಬಂಧಪಟ್ಟಂತೆ ಆನ್‌ಲೈನ್/ಕೇಂದ್ರೀಕೃತ ಕೌನ್ಸಿಲಿಂಗ್ ಪ್ರಕ್ರಿಯೆಯ ಮುಖಾಂತರ ವಿದ್ಯಾರ್ಥಿಗಳ ಪ್ರವೇಶಾತಿ ಮಾಡಿಕೊಳ್ಳುವುದನ್ನು ಖಾಸಗಿ/ ಅನುದಾನರಹಿತ ಶಿಕ್ಷಣ ಸಂಸ್ಥೆಗಳಿಗೆ ಕಡ್ಡಾಯಗೊಳಿಸಿರುವುದಿಲ್ಲ. ಸಂಬಂಧಪಟ್ಟ ಖಾಸಗಿ ಶಿಕ್ಷಣ ಸಂಸ್ಥೆಗಳು ತಮ್ಮ ಸಂಸ್ಥೆಗೆ ಆಡಳಿತ ಮಂಡಳಿಯ ಕೋಟಾದಿಂದ ಭರ್ತಿ ಮಾಡಿಕೊಳ್ಳುವ ಸೀಟುಗಳನ್ನು ನ್ಯಾಯಯುತವಾಗಿ ಮತ್ತು ಪಾರದರ್ಶಕವಾಗಿ ಮಾಡುವುದು. ಸಂಬಂಧಪಟ್ಟ ಶಿಕ್ಷಣ ಸಂಸ್ಥೆಯವರು ಕಡ್ಡಾಯವಾಗಿ ತಮ್ಮ ಸಂಸ್ಥೆಯಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿಗೆ ಅಳವಡಿಸಿಕೊಂಡಿರುವ ಆಯ್ಕೆವಿಧಾನಗಳ ಬಗ್ಗೆ ಹಾಗೂ ವಿದ್ಯಾರ್ಥಿಗಳು ಅನುಸರಿಸಬೇಕಾಗಿರುವ ವಿಧಿವಿಧಾನಗಳ ಬಗ್ಗೆ ವಿದ್ಯಾರ್ಥಿಗಳಿಗೆ ಸೂಕ್ತ ಮಾರ್ಗದರ್ಶನವನ್ನು ನೀಡುವುದು ಹಾಗೂ ಆಯ್ಕೆಪ್ರಕ್ರಿಯೆಗೆ ಸಂಬಂಧಿಸಿದಂತೆ K-MAT / GATE/ PGCET/ MAT/ CAT/ JMET/ ATMA ಮತ್ತು XAT ಅಥವಾ ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಘದವರು ನಡೆಸುವ K-MAT ಪರೀಕ್ಷೆಗಳಲ್ಲಿ, ವಿದ್ಯಾರ್ಥಿಗಳಿಗೆ ತಮಗೆ ಸೂಕ್ತವಾದ ಪರೀಕ್ಷೆಯನ್ನು ಆಯ್ದುಕೊಳ್ಳಲು ಸೂಕ್ತ ಮಾರ್ಗದರ್ಶನ ನೀಡುವುದು. ಇದಕ್ಕೆ ಸಂಬಂಧಿಸಿದಂತೆ ಸರ್ಕಾರವು ಒಂದು "**ಮೇಲ್ವಿಚಾರಣಾ ಸಮಿತಿ**"ಯನ್ನು ರಚಿಸಿದ್ದು, ಸದರಿ ಸಮಿತಿಯು ಈ ಎಲ್ಲಾ ಶಿಕ್ಷಣ ಸಂಸ್ಥೆಗಳು ತಮ್ಮ ಸಂಸ್ಥೆಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವಾಗ ಸರ್ಕಾರದ ಆದೇಶಗಳಲ್ಲಿ ತಿಳಿಸಿರುವ ಎಲ್ಲಾ ನಿಯಮಗಳನ್ನು/ ವಿಧಿವಿಧಾನಗಳನ್ನು ಅನುಸರಿಸಿರುವ ಬಗ್ಗೆ ಆಗಿಂದಾಗ್ಗೆ ಭೇಟಿ ನೀಡಿ ಪರಿಶೀಲಿಸುವುದು.

6) ರಿಕನ್ಸಿಲೇಷನ್ ಸಭೆಯ ನಂತರ ಭರ್ತಿಯಾಗದೇ ಬಾಕಿ ಉಳಿದ ಸೀಟುಗಳನ್ನು ಆಯಾ ಸಂಸ್ಥೆಯ ಆಡಳಿತ ಮಂಡಳಿಗಳಿಗೆ ಭರ್ತಿ ಮಾಡಿಕೊಳ್ಳಲು ನೀಡುವುದು.

7) ಕರ್ನಾಟಕ ಖಾಸಗಿ ಸ್ನಾತಕೋತ್ತರ ಪದವಿ ಕಾಲೇಜುಗಳ ಸಂಘದವರು ಬೆಂಗಳೂರಿನಲ್ಲಿ ಒಂದು ದೂರು ಪರಿಹಾರ ಕೇಂದ್ರವನ್ನು ಸ್ಥಾಪಿಸಿ, ಯಾವುದೇ ಸಂಸ್ಥೆ/ವಿದ್ಯಾರ್ಥಿಯಿಂದ ಸ್ವೀಕೃತವಾಗುವ ದೂರುಗಳನ್ನು ಪರಿಶೀಲಿಸಿ ಪರಿಹರಿಸುವುದು. ಯಾವುದೇ ಸಂಸ್ಥೆ/ವಿದ್ಯಾರ್ಥಿಯಿಂದ ಸ್ವೀಕೃತವಾಗುವ ದೂರುಗಳನ್ನು ಪರಿಹರಿಸುವಲ್ಲಿ ದೂರು ಪರಿಹಾರ ಕೇಂದ್ರವು ವಿಫಲವಾದಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರವು ಮಧ್ಯಪ್ರವೇಶಿಸಿ ಸೂಕ್ತ ಕ್ರಮ ಕೈಗೊಳ್ಳುವುದು.

8) 2020–21ನೇ ಶೈಕ್ಷಣಿಕ ಸಾಲಿಗೆ ಸ್ನಾತಕೋತ್ತರ ಪದವಿಗಳಾದ ಎಂ.ಬಿ.ಎ./ಎಂ.ಸಿ.ಎ/ಎಂ.ಇ/ ಎಂ.ಟೆಕ್ ಕೋರ್ಸುಗಳಿಗೆ ಮೇಲ್ಕಂಡಂತೆ ಪ್ರವೇಶಾತಿ ಪ್ರಕ್ರಿಯೆ ಮತ್ತು ಶುಲ್ಕ ನಿಗಧಿಯನ್ನು ಈ ಆದೇಶದಂತೆ ಅನುಷ್ಠಾನಗೊಳಿಸುವ ಬಗ್ಗೆ ಕ್ರಮವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
(ಜೆ.ಟಿ.ವೆಂಕಟರಾಮ) 30/7/2020
ಸರ್ಕಾರದ ಅಧೀನ ಕಾರ್ಯದರ್ಶಿ.(ಪ್ರಭಾರ)
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ರವರು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕೋರಿದೆ.

ಪ್ರತಿ:

1) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2) ರಿಜಿಸ್ಟ್ರಾರ್, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನ ಸಂಗಮ, ಬೆಳಗಾವಿ.
3) ರಿಜಿಸ್ಟ್ರಾರ್, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.
4) ರಿಜಿಸ್ಟ್ರಾರ್, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಬೆಂಗಳೂರು.
5) ರಿಜಿಸ್ಟ್ರಾರ್, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಕೋಲಾರ.
6) ರಿಜಿಸ್ಟ್ರಾರ್, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು.
7) ರಿಜಿಸ್ಟ್ರಾರ್, ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ.
8) ರಿಜಿಸ್ಟ್ರಾರ್, ಮೈಸೂರು ವಿಶ್ವವಿದ್ಯಾಲಯ, "ಮಾನಸ ಗಂಗೋತ್ರಿ", ಮೈಸೂರು.
9) ರಿಜಿಸ್ಟ್ರಾರ್, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
10) ರಿಜಿಸ್ಟ್ರಾರ್, ತುಮಕೂರು ವಿಶ್ವವಿದ್ಯಾಲಯ, ತುಮಕೂರು.
11) ರಿಜಿಸ್ಟ್ರಾರ್, ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ.
12) ರಿಜಿಸ್ಟ್ರಾರ್, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ.
13) ರಿಜಿಸ್ಟ್ರಾರ್, ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.
14) ರಿಜಿಸ್ಟ್ರಾರ್, ರಾಣಿಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
15) ರಿಜಿಸ್ಟ್ರಾರ್, ಜಾನಪದ ವಿಶ್ವವಿದ್ಯಾಲಯ, ಹಾವೇರಿ.
16) ರಿಜಿಸ್ಟ್ರಾರ್, ಕಲಬುರಗಿ ವಿಶ್ವವಿದ್ಯಾಲಯ, ಕಲಬುರಗಿ.
17) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಮಲ್ಲೇಶ್ವರಂ, ಬೆಂಗಳೂರು.
18) ನಿರ್ದೇಶಕರು, ತಾಂತ್ರಿಕ ಶಿಕ್ಷಣ, ಅರಮನೆ ರಸ್ತೆ, ಬೆಂಗಳೂರು.
19) ಕಾರ್ಯದರ್ಶಿಗಳು, ಕಾಮೆಡ್-ಕೆ, #132, 2ನೇ ಮಹಡಿ, 11ನೇ ಮೇನ್, 17ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು–560055.
20) ಕಾರ್ಯದರ್ಶಿಗಳು, ಕರ್ನಾಟಕ ಖಾಸಗಿ ಸ್ನಾತಕೋತ್ತರ ಕಾಲೇಜುಗಳ ಸಂಘ, ವಸ್ತ್ರ ಭವನ, 4ನೇ ಮುಖ್ಯ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು–560055.



22/7/20

21) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ.

22) ಸರ್ಕಾರದ ಉಪ ಕಾರ್ಯದರ್ಶಿಗಳು (ವಿಶ್ವವಿದ್ಯಾಲಯಗಳು), ಉನ್ನತ ಶಿಕ್ಷಣ ಇಲಾಖೆ.

23) ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

24) ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿ.

23 JUL 2020

# ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

'ಜ್ಞಾನ ಸಂಗಮ', ಬೆಳಗಾವಿ - ೫೯೦ ೦೧೮, ಕರ್ನಾಟಕ ರಾಜ್ಯ

ಪ್ರೊ. ಎ.ಎಸ್. ದೇಶಪಾಂಡೆ, ಬಿ.ಇ., ಎಮ್.ಟೆಕ್., ಪಿ.ಎಚ್.ಡಿ.
ಕುಲಸಚಿವರು

ದೂರವಾಣಿ: (0831) 2405468
ಫ್ಯಾಕ್ಸ್ : (0831) 2405467


ಉಲ್ಲೇಖ ಸಂ:ವಿತಾವಿ/ಆಡಳಿತ /2020-2021/A-10 3518

ದಿನಾಂಕ : 25 NOV 2020

CR4823 30/11/2020

To,
The Administrative Officer,
Karnataka Examinations Authority,
Sampige Road, 18th Cross,
Malleshwaram,
Bengaluru- 560 012.

Sir,

**Sub: Registration and tuition fee of VTU for the year 2020-21 reg-**

With reference to the above subject, the details of UG/PG registration fee for Autonomous & Affiliated Colleges & tuition fee for University B.Tech. programmes of VTU for the year 2020-21 are as under.

**1) Affiliated Colleges/Autonomous Colleges**

**Registration fees**

| Course | Course | Fee Per Student (To be paid to VTU by KEA) |
|---|---|---|
| UG | BE/B.Tech/B.Arch/ B.Paln | Rs. 3000 |
| PG | MBA/MCA/M.Tech./M.Arch | Rs. 3500 |

**2) University B.Tech. Programmes**

| Course | University fee (To be paid to VTU by KEA) |
|---|---|
| UG | Rs. 19,090/- ( including University Registration fee) * |

**P.N.:** * As per the Government Order No. ED146/TEC-2020, Bangalore dated 19-19-2020.

Thanking you,

Yours faithfully,

25.11.2020

**REGISTRAR**

**Copy for kind information to:**

1. The Principal Secretary, Dept. Higher Education, 5th Floor, M.S. Building, Dr. Ambedkar veedhi, Bengaluru
2. The Under Secretary (Universities/ Technical)., Dept. Higher Education, 5th Floor, M.S. Builiding, Dr. Ambedkar veedhi, Bengaluru
3. The Secretary to Vice-Chancellor, VTU, Belagavi
4. The Secretary to Registrar, VTU, Belagavi